Govt. Job Updates at: www.coastalhut.com

# ಕರ್ನಾಟಕ ಸರಕಾರ

ಗ್ರಾಮಲೆಕ್ಕಿಗರ ನೇರ ನೇಮಕಾತಿ ಆಯ್ಕೆ ಪ್ರಾಧಿಕಾರಗಳು

ಹಾಗೂ ಜಿಲ್ಲಾಧಿಕಾರಿಗಳು ಕಲಬುರಗಿ

ಕಚೇರಿ ವಿಳಾಸ: ಮೊದಲನೆಯ ಮಹಡಿ, ವಿಕಾಸ ಭವನ,

ಮುಖ್ಯ ರಸ್ತೆ, ಕಲಬುರಗಿ-585101

*****

## ಗ್ರಾಮಲೆಕ್ಕಿಗರ ಹುದ್ದೆಯ ನೇರ ನೇಮಕಾತಿ ಸಂಬಂಧ

## ಮಾಹಿತಿ ಸೂಚಿ

Scanned by CamScanner

Govt. Job Updates at: www.coastalhut.com

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಕಂದಾಯ ಇಲಾಖೆ, ಕಲಬುರಗಿ ಜಿಲ್ಲೆ

## ಅಧಿಸೂಚನೆ

**ಸಂಖ್ಯೆ:** ಕಂದಾಯ/ ಸಿಬ್ಬಂದಿ-1/ ಗ್ರಾಲೇನೇಮಕಾತಿ/ 17/ 2016-17 **ದಿನಾಂಕ:** 24.05.2017

ಕಲಬುರಗಿ ಜಿಲ್ಲೆ ಕಂದಾಯ ಘಟಕದಲ್ಲಿ ಬರುವ ತಾಲ್ಲೂಕು ಕಛೇರಿಗಳಲ್ಲಿ ಹಾಗೂ ಭೂಮಿ ಕೇಂದ್ರಗಳಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವೆಗಳು (Revenue Subordinate Branch) (Cadre & Recruitment) (ತಿದ್ದುಪಡಿ) ನಿಯಮಗಳು, 2009 ರನ್ವಯ ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ Govt Order No: REV/04/ BSD/ 2011 Date: 25.02.2011 ಮತ್ತು ಸಿಆಸುಇ/ 91/ ಹೈಕಕೋ/ 2014 ದಿನಾಂಕ: 06.12.2014 ಮತ್ತು ಪತ್ರ ಸಂಖ್ಯೆ ಕಂಇ/ 32/ ಬಿಎಸ್‌ಐ/ 2015 ದಿನಾಂಕ: 02.03.2015 ರಲ್ಲಿ ನೀಡಿದ ನಿರ್ದೇಶನದಂತೆ ನೇರ ನೇಮಕಾತಿಯಿಂದ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗಧಿಪಡಿಸಿದ ನಮೂನೆಗಳಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹುದ್ದೆಗಳ ವರ್ಗೀಕರಣದ ವಿವರಗಳನ್ನು ಅಧಿಸೂಚನೆಯ ಅನುಬಂಧ-1 ರಲ್ಲಿ ತೋರಿಸಿದೆ. ಅನುಬಂದದಲ್ಲಿ ತಿಳಿಸಿರುವ ಹುದ್ದೆಗಳ ಸಮಖ್ಯೆ ಮತ್ತು ವರ್ಗೀಕರಣವು ಅನಿವಾರ್ಯ ಸಂದರ್ಭದಲ್ಲಿ ಬದಲಾವಣೆಗೆ ಒಳಪಟ್ಟಿರುತ್ತದೆ.

## ಹುದ್ದೆಗಳ ವಿವರ ಮತ್ತು ವೇತನ ಶ್ರೇಣಿ

ಅ] ಹುದ್ದೆ ಹಾಗೂ ಸಂಖ್ಯೆ : ಗ್ರಾಮಲೆಕ್ಕಿಗರು, ಹುದ್ದೆಗಳ ಸಂಖ್ಯೆ 32 [ಹೈದ್ರಾಬಾದ-ಕರ್ನಾಟಕ ಪ್ರದೇಶದವರಿಗೆ ಮೀಸಲಿರಿಸಿದ ಹುದ್ದೆಗಳು-32]

ಆ] ವೇತನ ಶ್ರೇಣಿ : ರೂ. 11600-200-12000-250-13000-14200-350-15600-400-17200-450-19000-500-21000

ಇ] ಹುದ್ದೆಗಳ ವರ್ಗೀಕರಣ : [ರೋಸ್ಟರ್ ಬಿಂದು 63 ರಿಂದ 94 ರವರೆಗೆ] 2016-17 ನೇ ಸಾಲಿನ ಖಾಲಿ ಹುದ್ದೆಗಳು [ರೋಸ್ಟರ್ ಬಿಂದು 63 ರಿಂದ 94]

**ಅನುಬಂಧ-1**

**ಹೈದ್ರಾಬಾದ ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ವಿವರ**

| ಕ್ರ ಸಂ | ವರ್ಗೀಕರಣದ ವಿವರ | ಸಾಮಾನ್ಯ ಅಭ್ಯರ್ಥಿ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲರು | ಮಾಜಿ ಸೈನಿಕರು | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತರು | ಒಟ್ಟು |
|---|---|---|---|---|---|---|---|---|---|
| 1] | ಪರಿಶಿಷ್ಟಜಾತಿ | 1 | 2 | 1 | 1 | 0 | 0 | 0 | 5 |
| 2] | ಪರಿಶಿಷ್ಟ ಪಂಗಡ | 0 | 1 | 0 | 0 | 0 | 0 | 0 | 1 |
| 3] | ಪ್ರವರ್ಗ-1 | 1 | 0 | 0 | 0 | 0 | 0 | 0 | 1 |
| 4] | ಪ್ರವರ್ಗ-2ಎ | 1 | 1 | 2 | 1 | 0 | 0 | 0 | 5 |
| 5] | ಪ್ರವರ್ಗ- 2ಬಿ | 1 | 0 | 0 | 0 | 0 | 0 | 0 | 1 |
| 6] | ಪ್ರವರ್ಗ- 3ಎ | 1 | 0 | 0 | 0 | 0 | 0 | 0 | 1 |
| 7] | ಪ್ರವರ್ಗ- 3ಬಿ | 0 | 1 | 1 | 0 | 0 | 0 | 0 | 2 |
| 8] | ಸಾಮಾನ್ಯ | 4 | 4 | 4 | 1 | 2 | 0 | 1 | 16 |
| | ಒಟ್ಟು | 9 | 9 | 8 | 3 | 2 | 0 | 1 | 32 |

Scanned by CamScanner

Govt. Job Updates at: www.coastalhut.com

**ಶೈಕ್ಷಣಿಕ ವಿದ್ಯಾರ್ಹತೆ:** ಪಿ.ಯು.ಸಿ. ಪರೀಕ್ಷೆ ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು. (ಮುಕ್ತ ವಿಶ್ವವಿದ್ಯಾಲಯ ಹೊರತುಪಡಿಸಿ)

1. **ವಯೋಮಿತಿ:** ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಗಿನಂತೆ ವಯೋಮಿತಿ ಹೊಂದಿರತಕ್ಕದ್ದು.

| | ಕನಿಷ್ಠ | ಗರಿಷ್ಠ |
|---|---|---|
| ಪ.ಜಾ/ಪ.ಪಂ/ಪ್ರ-1 | 18 ವರ್ಷ | 40 ವರ್ಷ |
| 2ಎ,2ಬಿ,3ಎ,3ಬಿ | 18 ವರ್ಷ | 38 ವರ್ಷ |
| ಸಾಮಾನ್ಯ ವರ್ಗ | 18 ವರ್ಷ | 35 ವರ್ಷ |

1977ರ ಕರ್ನಾಟಕ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳ ನಿಯಮ 6 ರಂತೆ ವಯೋಮಿತಿಯನ್ನು ಅದರಲ್ಲಿ ತಿಳಿಸಿರುವ ಮಟ್ಟಿಗೆ ಸಂಬಂಧಪಟ್ಟ ದಾಖಲೆ ಒದಗಿಸಿದ್ದಲ್ಲಿ ವಯೋಮಿತಿಯನ್ನು ಪರಿಶೀಲಿಸಲಾಗುವುದು.

2. **ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 24.06.2017**

3. **ಅರ್ಜಿಯ ನಮೂನೆ:**

**ಆನ್ ಲೈನ್ (On Line) ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು:-**

ಅರ್ಜಿಗಳನ್ನು ಆನ್ ಲೈನ್ (On Line) (ಎಲೆಕ್ಟ್ರಾನಿಕ್ ಮಾರ್ಗ) ಮುಖಾಂತರ ಮಾತ್ರ ಸಲ್ಲಿಸತಕ್ಕದ್ದಾಗಿದೆ. ಆನ್ ಲೈನ್‌ನಲ್ಲಿ ಅರ್ಜಿಯನ್ನು ಸಲ್ಲಿಸಿದವರು ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅಭ್ಯರ್ಥಿಯು ಕಛೇರಿಯ ಅಧಿಕೃತ ವೆಬ್ ಸೈಟ್‌ಗಳಾದ Kalaburagi - va.kar.nic.in ನ "ಆನ್ ಲೈನ್ ಮುಖಾಂತರ ಗ್ರಾಮಲೆಕ್ಕಿಗರ ನೇರ ನೇಮಕಾತಿ ಅರ್ಜಿ ತುಂಬುವುದು" ರ ಮೇಲೆ ಕ್ಲಿಕ್ ಮಾಡಿದಾಗ ತೆರೆದ ಕಂಪ್ಯೂಟರ್ ಪರಂದೆಯ ಮೇಲೆ ಅರ್ಜಿಯನ್ನು ತುಂಬಬೇಕು. ಅಭ್ಯರ್ಥಿಯು Submit Button ಅನ್ನು ಒತ್ತಿದರೆ ಅರ್ಜಿ ಸಂಖ್ಯೆ (Reference Number) ಸೃಷ್ಟಿಯಾಗುತ್ತದೆ. ಆನ್-ಲೈನ್ ಅರ್ಜಿಯನ್ನು ಭರ್ತಿ ಮಾಡಿದ ನಂತರ ಅಭ್ಯರ್ಥಿಗಳು ಸ್ವೀಕೃತಿ ಪತ್ರ ತೆಗೆದುಕೊಳ್ಳತಕ್ಕದ್ದು. ಶುಲ್ಕವನ್ನು ಆನ್ ಲೈನ್ ಮೂಲಕ ಪಾವತಿಸಲು ಮತ್ತು ಚಲನ್ ಸೃಷ್ಟಿಸಲು URL.No https://www.onlinesbh.com/prelogin/icollecthome.htm?corpID=441277 ಈ ರೀತಿ ಇರುತ್ತದೆ. ಬ್ಯಾಂಕಿನಲ್ಲಿ ನಿಗದಿತ ಅರ್ಜಿ ಶುಲ್ಕವನ್ನು ಪಾವತಿಸಲು ದಿನಾಂಕ **28.06.2017** ಕೊನೆಯ ದಿನವಾಗಿರುತ್ತದೆ. ಅಭ್ಯರ್ಥಿಯು ಸ್ವೀಕೃತಿ ಸ್ಲಿಪ್ ಅನ್ನು ಮತ್ತು ಚಲನ್ ಪಾವತಿಯು ಒಂದು ಪ್ರತಿಯನ್ನು ಕಡ್ಡಾಯವಾಗಿ ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು. ಇನ್ನೊಂದು ಚಲನ್ ಪ್ರತಿ ಬ್ಯಾಂಕ ಬಳಿ ಇರುತ್ತದೆ. ಈ ದಾಖಲೆಗಳನ್ನು ಪರಿಶೀಲನಗೆ ನಿಗದಿಪಡಿಸಿದ ದಿನಾಂಕದಂದು ಹಾಜರುಪಡಿಸತಕ್ಕದ್ದು.ಡಿ.ಡಿ, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಅಥವಾ ನಗದಾಗಿ ಸ್ವೀಕರಿಸಲಾಗುವುದಿಲ್ಲ. ಸಲ್ಲಿಸಿರುವ ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗುಸಲಾಗುವುದಿಲ್ಲ ಅಥವಾ ಬೇರೆ ಯಾವುದೇ ಇತರೆ ನೇಮಕಾತಿಗಳಿಗೆ ಹೊಂದಿಸಿ ಕೊಳ್ಳಲಾಗುವುದಿಲ್ಲ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕದೊಳಗೆ ಮಂಜುತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು.

1. ಅರ್ಜಿಗಳನ್ನು ದಿನಾಂಕ 24.05.2017 ರಿಂದ 24.06.2017 ರ ಸಂಜೆ 5.30 ರೊಳಗೆ ಸಲ್ಲಿಸತಕ್ಕದು.
2. ಅರ್ಜಿ ಶುಲ್ಕವನ್ನು ದಿನಾಂಕ 24.05.2017 ರಿಂದ 28.06.2017 ರ ಬರೆಗೆ ಸ್ಟೇಟ್ ಬ್ಯಾಂಕ್ ಆಫ್ ಹೈದ್ರಾಬಾದ ಯಾವುದಾದರೂ ಶಾಖೆಯಲ್ಲಿ ಬ್ಯಾಂಕ್ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.
3. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ನಿಗದಿತ ಶುಲ್ಕ ಪಾವತಿಯು ಕುರಿತು( Status) ಅನ್ನು ಶುಲ್ಕ ಪಾವತಿಸಿದ 5 ದಿನಗಳ ನಂತರ ಪರಿಶೀಲಿಸಿಕೊಳ್ಳಬಹುದಾಗಿದೆ.

ಅಭ್ಯರ್ಥಿಗಳು ಮೂಲ ದಾಖಲಾತಿಗಳನ್ನು ಪರಿಶೀಲಿನೆಗಾಗಿ ಹಾಜರಾಗಲು ಪ್ರವೇಶ ಪತ್ರಗಳನ್ನು ಪ್ರತ್ಯೇಕ ರವಾನಿಸಲಾಗುವುದಿಲ್ಲ. ಸದರಿ ಪ್ರವೇಶ ಪತ್ರಗಳನ್ನು ಈ ಕಚೇರಿಯ ಅಂತರ್ಜಾಲದಿಂದ ಅಭ್ಯರ್ಥಿಗಳು ಡೌನ್ ಲೋಡ್ ಮಾಡಿಕೊಳ್ಳಬೇಕು.

ಕಚೇರಿಯ ಅಧಿಕೃತ ವೆಬ್ ಸೈಟ್‌ಗಳಾದ Kalaburagi-va.kar.nic.in ನ ರಲ್ಲಿ ನೀಡಿರುವ ಹೆಚ್ಚಿನ ಮಾಹಿತಿಯನ್ನು ಪರಿಶೀಲಿಸಬಹುದಾಗಿದೆ. ಸಂಪರ್ಕಿಸಬಹುದಾದ ದೂರವಾಣಿ ಸಂಖ್ಯೆ: 08472-278605 ಅಥವಾ varecruitment2017@gmail.com ಇ-ಮೈಲ್ ಮೂಲಕ ಹೆಚ್ಚಿನ ಮಾಹಿತಿ ಬಯಸಬಹುದು.

Scanned by CamScanner

Govt. Job Updates at: www.coastalhut.com

4. **ಅಭ್ಯರ್ಥಿ ಬ್ಯಾಂಕ್‌ಗೆ ಪಾವತಿಸುವ ನಿಗದಿತ ಶುಲ್ಕ ಬಗ್ಗೆ:**

1. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ–1 ಹಾಗೂ ಮಾಜಿ ಸೈನಿಕ ಅಭ್ಯರ್ಥಿಗಳಿಗೆ **ರೂ.200–00** ಮಾತ್ರ
2. ಇತರೆ ಅಭ್ಯರ್ಥಿಗಳಿಗೆ **ರೂ.400–00** ಮಾತ್ರ

5. **ಜಾತಿ ಮೀಸಲಾತಿ ಕೋರಬಯಸುವ:**

- ಪ.ಜಾ/ಪ.ಪಂ.ಅಭ್ಯರ್ಥಿಗಳು ನಮೂನೆ ' ಡಿ '
- ಪ್ರವರ್ಗ–1 ಅಭ್ಯರ್ಥಿಗಳು ನಮೂನೆ ' ಇ '
- ಪ್ರವರ್ಗ–2ಎ,2ಬಿ,3ಎ,3ಬಿ,ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಪಟ್ಟ ತಹಸೀಲ್ದಾರ ರವರಿಂದ ಪ್ರಮಾಣ ಪತ್ರವನ್ನು ಪಡೆದು ಇದರ ದೃಢೀಕೃತ ನಕಲನ್ನು ಅರ್ಜಿಯೊಂದಿಗೆ ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

6. **ಗ್ರಾಮೀಣ ಅಭ್ಯರ್ಥಿ:**

ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪುಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10 ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು, ಗ್ರಾಮೀಣ ಅಭ್ಯರ್ಥಿಗಳೆಂದು ಮೀಸಲಿರಿಸಿದ್ದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅಭ್ಯರ್ಥಿಗಳು ನಮೂನೆ–2 ರ ಪ್ರಮಾಣ ಪತ್ರವಲ್ಲದೇ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಿಸಿದ ತಹಸೀಲ್ದಾರರಿಂದ ಪಡೆದು ದೃಢೀಕೃತ ಅರ್ಜಿಯೊಂದಿಗೆ ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು. ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ–1, ಪ್ರವರ್ಗ–2ಎ, 2ಬಿ,3ಎ,3ಬಿ. ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ–2 ರಲ್ಲಿ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಮೇಲುರುಜು ಮತ್ತು ಮೊಹರು ಮಾಡಿಸಿಕೊಂಡು ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು. ಮೀಸಲಾತಿ ಪ್ರಮಾಣಪತ್ರಗಳನ್ನು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

7. **ಅಂಗವಿಕಲ ಅಭ್ಯರ್ಥಿ:**

ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 9(1–ಎ) ರ ಅನ್ವಯ ರಾಜ್ಯ ಸಿವಿಲ್ ಸೇವೆಯಲ್ಲಿನ ಗ್ರೂಪ್–ಸಿ ಹುದ್ದೆಗಳ ನೇರ ನೇಮಕಾತಿಯಲ್ಲಿ ಅಂಗವಿಕಲರಿಗೆ ಶೇ.5 ರಷ್ಟು ಸಮತಳ ಮೀಸಲಾತಿ ಕಲ್ಪಿಸಲಾಗಿದೆ. ಸರ್ಕಾರದ ಆದೇಶ: ಸಿಆಸುಇ/52/ಎಸ್‌ಆರ್‌ಆರ್/59 ದಿ: 29–11–2002 ಹಾಗೂ ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್/54/ಎಸ್‌ಆರ್‌ಪಿ/2012 ದಿನಾಂಕ 23.06.2012 ರಂತೆ ಮೀಸಲಾತಿ ನೀಡಲಾಗುವುದು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಎ.115 ಸೇನೆನಿ 2005, ದಿನಾಂಕ: 19.11.2005 ರಲ್ಲಿ ನಿಗಧಿ ಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು ಅದರ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು. ಸದರಿ ಹುದ್ದೆಗೆ ಈ ಕೆಳಕಂಡ ಅಂಗವಿಕಲತೆ ಉಳ್ಳವರು ಮಾತ್ರ ಅರ್ಜಿ ಸಲ್ಲಿಸಬಹುದು.

1. ಕುಷ್ಠ ರೋಗದಿಂದ ಗುಣಮುಖರಾದವರು [Leprosy cured]
2. ಶ್ರವಣದೋಷ ಉಳ್ಳವರು[ Hearing impaired]
3. ಬುದ್ಧಿ ಮಾಂದ್ಯ ಉಳ್ಳವರು [ Mentally ill]
4. ದೈಹಿಕ ಅಂಗವಿಕಲತೆ ಉಳ್ಳವರು [ Locomotor Disability]

8. **ಕನ್ನಡ ಮಾಧ್ಯಮ ಅಭ್ಯರ್ಥಿ:**

ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10 ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲುರುಜು ಮಾಡಿಸಿ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

Scanned by CamScanner

Govt. Job Updates at: www.coastalhut.com

9. **ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ:**

ಯೋಜನೆಗಳಿಂದ ನಿರ್ವಸಿತರಾದ ಕುಟುಂಬಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಸಂಬಂಧಿಸಿದ ತಹಸೀಲ್ದಾರರು ನೀಡಿದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

10. **ಹೈದ್ರಾಬಾದ-ಕರ್ನಾಟಕ ಪ್ರದೇಶದ ಮೀಸಲಾತಿ ಬಗ್ಗೆ**

1) ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಒಳಪಡುವ ಕಲಬುರಗಿ ,ಕೊಪ್ಪಳ, ಬಳ್ಳಾರಿ, ರಾಯಚೂರು, ಯಾದಗಿರಿ, ಮತ್ತು ಬೀದರ ಜಿಲ್ಲೆಗಳ ಅಭ್ಯರ್ಥಿಗಳು ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಚಿಸಿದ್ದಲ್ಲಿ, ಸಂವಿಧಾನದ ಅನುಚ್ಛೇದ 371(ಜೆ) ಅಡಿಯಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಕಂದಾಯ ಉಪ ವಿಭಾಗದ ಉಪವಿಭಾಗಾಧಿಕಾರಿಗಳು ನೀಡಿರುವ ಅರ್ಹತಾ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ 24.06.2017 ರ ಒಳಗಾಗಿ ಪಡೆದಿರತಕ್ಕದ್ದು.
2) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗೆ ಅಥವಾ ಮೀಸಲಿರಿಸಲಾರದ ಹುದ್ದೆಗೆ ಅರ್ಜಿ ಸಲ್ಲಿಸಿದ ಬಗ್ಗೆ ಕಡ್ಡಾಯವಾಗಿ ನಮೂದಿಸತಕ್ಕದ್ದು.
3) ಹೈದ್ರಾಬಾದ-ಕರ್ನಾಟಕ ಪ್ರದೇಶದವರಲ್ಲದ ಅಭ್ಯರ್ಥಿಗಳು ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.
4) ಹೈದ್ರಾಬಾದ-ಕರ್ನಾಟಕ ಪ್ರದೇಶಕ್ಕೆ ಮೀಸಲಿರಿಸಿದ ಹುದ್ದೆಗಳ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಅರ್ಹತಾ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ, [ಅಧ್ಯಕ್ಷರು, ಹೈದ್ರಾಬಾದ ಕರ್ನಾಟಕ ಅರ್ಹತಾ ಪ್ರಮಾಣ ಪತ್ರ ಪರಿಶೀಲನಾ ಸಮಿತಿ] ರವರಿಂದ ಸಿಂಧುತ್ವ ಪ್ರಮಾಣಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.

12. **ಅರ್ಹತಾ ಷರತ್ತುಗಳು:**

1) ಅರ್ಜಿದಾರರು ಭಾರತೀಯ ನಾಗರೀಕನಾಗಿರತಕ್ಕದ್ದು.
2) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತವರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಅತಂಕವನ್ನುಂಟುಮಾಡುವ ಸಂಬವವಿರುವಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.
3) ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅಭ್ಯರ್ಥಿ ಅನರ್ಹರೆಂದು ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ನೇಮಕಾತಿ ಪ್ರಾಧಿಕಾರ ಕಾಯ್ದಿರಿಸಿಕೊಂಡಿದೆ.
4) ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿ ವಯೋಮಿತಿಯೊಳಗಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸುವ ಅರ್ಹತೆಯನ್ನು ಹೊಂದಿರುತ್ತಾರೆ.
5) ಅಭ್ಯರ್ಥಿಯು ನೇಮಕವಾದಲ್ಲಿ ಅವರು ಈ ಜಿಲ್ಲೆಯಲ್ಲಿ ಎರಡು ವರ್ಷಗಳ ಅವಧಿಯ ಸೇವೆಯನ್ನು ಕಡ್ಡಾಯವಾಗಿ ಕಲಬುರಗಿ ಜಿಲ್ಲೆಯ್ಯಲ್ಲಿಯೇ ಪೂರ್ಣಗೊಳಿಸಬೇಕು ಅಭ್ಯರ್ಥಿಗಳು ನೇಮಕಾತಿ ಹೊಂದಿದ ನಂತರ ರೂ.50,000/- ಹಣವನ್ನು ಜಿಲ್ಲಾಧಿಕಾರಿಗಳು, ಕಲಬುರಗಿ ಹೆಸರಿನಲ್ಲಿ ಚೆಕ್ ಮೂಲಕ ಈ ಕಚೇರಿಗೆ ಸಲ್ಲಿಸತಕ್ಕದ್ದು. ಈ ಹಣವನ್ನು ಠೇವಣಿ ರೂಪದಲ್ಲಿ ಇಡಲಾಗುವುದು. ಎರಡು ವರ್ಷಗಳ ನಂತರ ರೂ.5000/-ನ್ನು ಕಡತಗೊಳಿಸಿ ರೂ.45,000/-ಗಳನ್ನು ಸಂಬಂಧಪಟ್ಟ ಅಭ್ಯರ್ಥಿಗಳಿಗೆ ಮರಳಿಸಲಾಗುವುದು. ಒಂದುವೇಳೆ ಯಾವುದಾದರೂ ಅಭ್ಯರ್ಥಿ ಎರಡು ವರ್ಷಗಳಲ್ಲಿ ನೇಮಕಾತಿ ಹೊಂದಿದ ಗ್ರಾಮಲೆಕ್ಕಾಧಿಕಾರಿ ಹುದ್ದೆಯನ್ನು ಬಿಟ್ಟುಹೋದಲ್ಲಿ ಅಂತಹ ಅಭ್ಯರ್ಥಿಗಳ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

13. **ಪ್ರಮುಖವಾದ ಸೂಚನೆಗಳು** :

ಅಭ್ಯರ್ಥಿಗಳು ಕೆಳಕಂಡ ಪ್ರಮಾಣ ಪತ್ರಗಳನ್ನು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

Scanned by CamScanner

Govt. Job Updates at: www.coastalhut.com

1) ಹುದ್ದೆಗಳಿಗೆ ನಿಗದಿ ಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಪ್ರಮಾಣಪತ್ರಗಳು.
2) ಜನನ ಪ್ರಮಾಣ ಪತ್ರ ಅಥವಾ ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ.
3) ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ).
4) ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1,ಪ್ರವರ್ಗ-2ಬಿ, ಪ್ರವರ್ಗ-3ಎ, ಮತ್ತು ಪ್ರವರ್ಗ-3ಬಿ, ಗಲ ಮೀಸಲಾಗಿ ಪ್ರಮಾಣ ಪತ್ರಗಳು- ನಿಗದಿತ ನಮೂನೆಯಲ್ಲಿ (ಮೀಸಲಾತಿ ಕೋರಿದ್ದಲ್ಲಿ).
5) ಗ್ರಾಮೀಣ ಮೀಸಲಾತಿ ಪ್ರಮಾಣಪತ್ರ ನಮೂನೆ-1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ).
6) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
7) ಅಂಗವಿಕಲ ಮೀಸಲಾತಿ ಅಭ್ಯರ್ಥಿಯ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
8) ಯೋಜನೆಗಳಿಂದ ನಿರಾಶ್ರಿತರಾದ ಅಭ್ಯರ್ಥಿಯ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ).
9) ವಿಧವೆಯಾದಲ್ಲಿ ಸಕ್ಷಮ ಪ್ರಾಧೀಕಾರದಿಂದ ಪಡೆದ ಪ್ರಮಾಣಪತ್ರ.
10) ಜಾತಿ ಮೀಸಲಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಜಿಲ್ಲಾಧಿಕಾರಿ (ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ )ರವರಿಂದ ಸಿಂಧುತ್ವ ಪ್ರಮಾಣಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
11) ಅರ್ಜಿಯಲ್ಲಿ ಸಲ್ಲಿಸಿರುವ ಮೀಸಲಾತಿ ಕೋರಿರುವ/ವಯೋಮಿತಿ ರಿಯಾಯಿತಿ ಕೋರಿರುವ ಅಗತ್ಯ ದಾಖಲಾತಿಗಳನ್ನು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕದೊಳಗೆ ಸಂಬಂಧಿಸಿದ ಕಛೇರಿಯಿಂದ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡು, ಮೂಲದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಹಾಜರುಪಡಿಸುವುದು.

14. **ಕಲಬುರಗಿ ಜಿಲ್ಲಾಧಿಕಾರಿಯವರ ಕಛೇರಿಯೊಂದಿಗೆ ಪತ್ರ ವ್ಯವಹಾರ:**

ಕಲಬುರಗಿ ಜಿಲ್ಲಾಧಿಕಾರಿಯವರ ಕಛೇರಿಯು ಅಭ್ಯರ್ಥಿಯ ವಿಚಾರದಲ್ಲಿ ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿ ಮೂಲಕ ಕಲಬುರಗಿ ಜಿಲ್ಲಾಧಿಕಾರಿಯವರ ಕಛೇರಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಪ್ರಾಧಿಕಾರವು ಪ್ರಯತ್ನಿಸುವುದು. ಅದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಪ್ರಾಧಿಕಾರವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸ ತಕ್ಕದ್ದು.

15. **ಇತರ ಸೂಚನೆಗಳು:**

1. ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಪಡೆದ CHALLAN ಹಾಗೂ Acknowledgement Slip ಮಡಚುವುದಾಗಲೀ ಹರಿಯವುದಾಗಲೀ ಮಾಡದೇ ಹಾಳಾಗದಂತೆ ಎಚ್ಚರ ವಹಿಸತಕ್ಕದ್ದು.
2. ಸೇವೆಯಲ್ಲಿರುವ ಅಭ್ಯರ್ಥಿಗಳು ಅವರ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣ ಪತ್ರ (NO OBJECTION CERTIFICATE ) ವನ್ನು ಪಡೆದು ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.
3. ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿ, ಕಲಬುರಗಿ ಜಿಲ್ಲೆ ಕಲಬುರಗಿ ಇವರು ಕಾಯ್ದಿರಿಸಿಕೊಂಡಿರುತ್ತಾರೆ.
4. ಅಭ್ಯರ್ಥಿಯ ಹೆಸರು ಅಂತಿಮ ಆಯ್ಕೆ ಪಟ್ಟಿಯಲ್ಲಿ ಬಂದಿದೆ ಎಂಬುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿಯು ಯಾವುದೇ ಹಕ್ಕು ದೊರೆಯುವುದಿಲ್ಲ. ಆಯ್ಕೆಯ ಸಂಬಂಧವಾಗಿ ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದ ಇರುವುದಿಲ್ಲ.

16. **ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು ಕಂಡು ಬಂದಲ್ಲಿ ಅವನು/ಅವಳು ಸ್ವಂತ:

Scanned by CamScanner

Govt. Job Updates at: www.coastalhut.com

ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

17. <u>ಆಯ್ಕೆ ವಿಧಾನ:</u>

ಕರ್ನಾಟಕ ಜನರಲ್ ಸರ್ವಿಸ ( Revenue subordinated branch) (Cadre & Recruitment) (ತಿದ್ದುಪಡಿ) ನಿಯಮಗಳು 2008 ಮತ್ತು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಪ್ರಕಾರ ಅಭ್ಯರ್ಥಿಯನ್ನು ಅವರು ಪಿ.ಯು.ಸಿ. ಅಥವಾ CBSE ಅಥವಾ ICSE ನಡೆಸುವ 12ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ (on merit) ಆಧಾರದ ಮೇಲೆ ಆಯಾಯ ಮೀಸಲಾತಿ ಪ್ರವರ್ಗಕ್ಕೆ ಸಂಬಂಧಿಸಿದಂತೆ ಆಯ್ಕೆ ಮಾಡಲಾಗುವುದು.

ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು
ಗ್ರಾಮಲೆಕ್ಕಿಗರ ನೇಮಕಾತಿ ಪ್ರಾಧಿಕಾರ
ಕಲಬುರಗಿ ಜಿಲ್ಲೆ ಕಲಬುರಗಿ

<u>ಪ್ರತಿಯನ್ನು:-</u>

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು ಇವರ ಅವಗಾಹನೆಗೆ.
2) ಮುಖ್ಯ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
3) ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಸೇವೆಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಅವಗಾಹನೆಗೆ ಸಲ್ಲಿಸಿದೆ.
4) ಪ್ರಾದೇಶಿಕ ಆಯುಕ್ತರು, ಕಲಬುರಗಿ ವಿಭಾಗ, ಕಲಬುರಗಿ ರವರ ಮಾಹಿತಿಗಾಗಿ ಸಲ್ಲಿಸಿದೆ.
5) ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಯವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
6) ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗಳು, ಕಲಬುರಗಿ ಜಿಲ್ಲೆ, ಕಲಬುರಗಿ.
7) ಜಿಲಾ ಅಧಿಕಾರಿ, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆ, ಕಲಬುರಗಿ ಜಿಲ್ಲೆ ಕಲಬುರಗಿ
8) ಉಪನಿರ್ದೇಶಕರು, ಮಹಿಳಾ ಮತ್ತು ಅಭಿವೃದ್ಧಿ ಇಲಾಖೆ ಕಲಬುರಗಿ ಜಿಲ್ಲೆ ಕಲಬುರಗಿ.
9) ಉಪವಿಭಾಗಾಧಿಕಾರಿಯವರು, ಕಲಬುರಗಿ /ಸೇಡಂ ಇವರಿಗೆ ಕಳುಹಿಸಿ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
10) ತಹಸೀಲ್ದಾರರು, ಕಲಬುರಗಿ /ಆಳಂದ/ಜೇವರ್ಗಿ/ಅಫಜಲಪುರ/ಸೇಡಂ/ಚಿತ್ತಾಪೂರ/ಚಿಂಚೋಳಿ/
11) ವಿಶೇಷ ತಹಸೀಲ್ದಾರರು, ಕಲಬುರಗಿ (ಉತ್ತರ)/ಯಡ್ರಾಮಿ/ಕಾಳಗಿ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
12) ಹೆಚ್ಚಿನ ಪ್ರತಿಗಳು.

Scanned by CamScanner

Govt. Job Updates at: www.coastalhut.com

# Calender of Events(ವೇಳಾ ಪಟ್ಟಿ)

ಕಲಬುರಗಿ ಜಿಲ್ಲೆ ಗ್ರಾಮ ಲೆಕ್ಕಿಗರ ನೇರ ನೇಮಕಾತಿಗೆ ಸಂಬಂಧಿಸಿದಂತೆ ವೇಳಾ ಪಟ್ಟಿ

| ಕ್ರ ಸಂ | ವಿವರ | ದಿನಾಂಕ |
|---|---|---|
| 1 | ಅಧಿಸೂಚನೆ ಹೊರಡಿಸಿದ ದಿನಾಂಕ | 24.05.2017 |
| 2 | ಜಿಲ್ಲಾಧಿಕಾರಿಗಳು ಅರ್ಜಿ ಕರೆಯಲು ನಿಗಧಿಪಡಿಸಿದ ದಿನಾಂಕ | 24.05.2017 |
| 3 | ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 24.06.2017 |
| 4 | ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ನಿಗಧಿಪಡಿಸಿದ ದಿನಾಂಕ | 24.07.2017 |
| 5 | ತಾತ್ಕಾಲಿಕ ಆಯ್ಕೆ ಪಟ್ಟಿಗೆ ಆಕ್ಷೇಪಣೆಗಳು ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ | 10.08.2017 |
| 6 | ತಾತ್ಕಾಲಿಕ ಆಯ್ಕೆ ಪಟ್ಟಿಯಂತೆ ಅಭ್ಯರ್ಥಿಗಳ ಮೂಲ ದಾಖಲಾತಿಗಳೊಂದಿಗೆ ಪರಿಶೀಲನೆಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಹಾಜರಾಗಬೇಕಾದ ನಿಗಧಿಪಡಿಸಿದ ದಿನಾಂಕ | 25.08.2017<br>ಬೆಳಗ್ಗೆ: 11.00 ಗಂಟೆಗೆ |
| 7 | ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ನಿಗಧಿಪಡಿಸಿದ ದಿನಾಂಕ | 15.09.2017 |
| 8 | ವೆಬ್ ಸೈಟ್ ವಿಳಾಸ | http:kalaburagi-va.kar.nic.in |
| 9 | ಸ್ಪಷ್ಟೀಕರಣ /ಮಾಹಿತಿಗಾಗಿ ಸಂಪರ್ಕಿಸಬಹುದಾದ ಹೆಲ್ಪ್ ಲೈನ್ | 08472- 278605 |

ಸಹಿ/-
ಜಿಲ್ಲಾಧಿಕಾರಿಗಳು ಕಲಬುರಗಿ

Scanned by CamScanner